# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/174/2022-23 ದಿನಾಂಕ : 21-11-2022

ದಿನಾಂಕ: 18-11-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ:174 ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**<u>ಉಪಸ್ಥಿತರು:</u>**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ:143 ಹೊಸ ಸಂಖ್ಯೆ: 174 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 9 | ಶ್ರೀ.ನರಸಿಂಹ | ಕಿರಯ ಆರೋಗ್ಯ ಪರಿವೀಕ್ಷಕರು | 8660658637 |

ದಿನಾಂಕ 18-11-2022 ರಂದು ನಡೆದ ವಾರ್ಡ್ -174 ರ ಸಮಿತಿ ಸಭೆಯ ನಡಾವಳಿಗಳು:-

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರುಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲಿಗೆ ಸಭೆಯಲ್ಲಿ ಹಾಜರಿದ್ದ ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ. ಓ.ವಿ. ಜಯಕುಮಾರ್ ರವರು ಮಾತನಾಡಿ ಕೆಲವು ವಿಷಯಗಳನ್ನು ಸಭೆಯಲ್ಲಿ ಪ್ರಸ್ತಾಪಿಸಿ ಸೂಕ್ತ ಕ್ರಮಕೈಗೊಂಡು ಪರಿಹರಿಸುವಂತೆ ಕೋರಿದರು. ಅವುಗಳೆಂದರೆ 1).ಪಾರಿವಾಳಗಳ ಪಾರ್ಕ್‌ನಲ್ಲಿ ಆಹಾರ ಧಾನ್ಯಗಳನ್ನು ಹಾಕುತ್ತಿರುವುದನ್ನು ತಪ್ಪಿಸುವುದು. 2). ಬೀಡಾಡಿ ಹಸುಗಳ ಅವಳಿಯನ್ನು ತಪ್ಪಿಸುವುದು,3). ಹಸಿಕಸ ಮತ್ತು ಒಣಕಸವನ್ನು ವಿಂಗಡಿಸಿ ನೀಡುವಂತೆ ಸಾರ್ವಜನಿಕರಲ್ಲಿ

ಪು.ತಿ.ನೋ

ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದು, 4). ಮಿಡಲ್ ಸ್ಕೂಲ್ ಕ್ರಾಸ್ ರಸ್ತೆಯಲ್ಲಿರುವ ಕೋಟಕ್ ಮಹಿಂದ್ರ ಬ್ಯಾಂಕ್ ಮುಂಭಾಗದಲ್ಲಿ ಕುಡಿಯುವ ನೀರಿನ ಕೊಳವೆ ಹಾಳಾಗಿ ನೀರು ಸೋರಿಕೆಯಾಗುತ್ತಿರುವುದನ್ನು ಸರಿಪಡಿಸುವುದು, 5). ವಿ.ವಿ.ಪುರಂ ವ್ಯಾಪ್ತಿಯಲ್ಲಿರುವ ಬೀಡಾಡಿ ವಾಹನಗಳನ್ನು ತೆರವುಗೊಳಿಸುವುದು, ಈ ಎಲ್ಲಾ ವಿಷಯಗಳನ್ನು ಮಾನ್ಯ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಚರ್ಚಿಸಲಾಗಿ ಸಂಬಂಧಪಟ್ಟ ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳು ಹಾಗೂ ಹಿರಿಯ, ಕಿರಿಯ ಆರೋಗ್ಯ ಪರಿವೀಕ್ಷಕರುಗಳನ್ನು ಸಂಪರ್ಕಿಸಿ ಸಮನ್ವಯತೆಯಿಂದ ಸದರಿ ವಿಷಯಗಳ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಎಂ.ಎಂ.ವಿ. ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ. ಎಸ್.ವೆಂಕಟೇಶ್ ರವರು ಮಾತನಾಡುತ್ತಾ ನ್ಯಾಷನಲ್ ಹೈ ಸ್ಕೂಲ್ ರಸ್ತೆ ಮತ್ತು ಎಂ.ಎಂ.ವಿ. ರಸ್ತೆಗಳು ಸೇರುವ ಜಂಕ್ಷನ್‌ನಲ್ಲಿ ರಸ್ತೆ ಉಬ್ಬುಗಳನ್ನು (Road Hump) ಹಾಕುವುದು, ಎಂ.ಎಂ.ವಿ. ರಸ್ತೆಯಲ್ಲಿ ಮಳೆ ನೀರು ಚರಂಡಿಯ ಕಾಮಗಾರಿಯು ಪ್ರಗತಿಯಲ್ಲಿದ್ದು ಮಣ್ಣ ತೆಗೆಯುವ ಸಂದರ್ಭದಲ್ಲಿ ನೀರಿನ ಕೊಳವೆ, ಒಳಚರಂಡಿ ಕೊಳವೆ ಹಾಗೂ ಇತರೆ ಕೇಬಲ್‌ಗಳು ಹಾಳಾಗಿದ್ದು, ಸದರಿಯವುಗಳನ್ನು ಕೂಡಲೇ ಸರಿಪಡಿಸಲು ಗುತ್ತಿಗೆದಾರರಿಗೆ ಸೂಚಿಸುವಂತೆ ಕೋರಿ ಸಭೆಗೆ ತಿಳಿಸಿದರು. ಮಾನ್ಯ ನೋಡಲ್ ಅಧಿಕಾರಿಗಳು ಈ ವಿಷಯಗಳ ಬಗ್ಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಪಾರ್ವತಿಪುರ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ. ಮಧು ಮತ್ತು ರಾಮಲಿಂಗ ರವರು ಮಾತನಾಡಿ ಸಜ್ಜನರಾವ್ ರಸ್ತೆ ಶಂಭುಪಾಳ್ಯ ಮುಂಭಾಗದಲ್ಲಿರುವ ಹೈ ಮಾಸ್ಕ್ ಮತ್ತು ಪಾರ್ವತಿಪುರ ದ್ವಾರದಲ್ಲಿರುವ ಹೈ ಮಾಸ್ಕ್ ದೀಪಗಳು ಹಾಳಾಗಿದ್ದು ಸರಿಪಡಿಸಿಕೊಡಬೇಕೆಂದು ಸಭೆಯಲ್ಲಿ ಕೋರಿದರು, ಮಾನ್ಯ ನೋಡಲ್ ಅಧಿಕಾರಿಗಳು ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳುವಂತೆ ಸಂಬಂಧ ಪಟ್ಟ ಇಲಾಖೆಯ ಅಧಿಕಾರಿಗಳನ್ನು ಕೋರುವುದಾಗಿ ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ ಶ್ರೀ. ರಾಜು ರವರು ಮಾತನಾಡಿ ಸಭೆಯಲ್ಲಿ ಈ ಕೆಳಗಿನ ವಿಷಯಗಳನ್ನು ಪ್ರಸ್ತಾಪಿಸಿ ಕ್ರಮ ವಹಿಸುವಂತೆ ಕೋರಿದರು. ಅವುಗಳೆಂದರೆ 1. ಎಂ.ಎನ್. ಕೃಷ್ಣರಾವ್ ರಸ್ತೆಯ ಪಾದಾಚಾರಿ ಮಾರ್ಗದಲ್ಲಿ ಬೊಲ್ಲಾರ್ಡ್‌ಗಳನ್ನು ಅಳವಡಿಸುವುದು, 2. ಶ್ರೀರಾಮ ಮಂದಿರ ರಸ್ತೆಯ ಕನ್ಸರ್‌ವೆನ್ಸಿಯನ್ನು ಒತ್ತುವರಿ ಮಾಡಿಕೊಂಡು ಹಸುಗಳ ಶೆಡ್ ನಿರ್ಮಿಸಿರುವುದನ್ನು ತೆರವುಗೊಳಿಸುವುದು, 3. ಆರ್.ವಿ.ರಸ್ತೆಯಲ್ಲಿ ಬಸ್ ಶೆಲ್ಟರ್ ನಿರ್ಮಿಸುವುದು, 4. ಸರ್ವೇಯರ್ ರಸ್ತೆ ಕನ್ಸರ್‌ವೆನ್ಸಿಯಲ್ಲಿರುವ ನಾನ್‌ವೆಜ್ ಹೋಟೆಲ್ ತೆರವುಗೊಳಿಸುವುದು, ಸದರಿ ವಿಷಯಗಳ ಬಗ್ಗೆ ಪಶುಸಂಗೋಪನಾ ಇಲಾಖೆಯ ಅಧಿಕಾರಿಗಳು, ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಸಂಬಂಧ ಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಸಂಪರ್ಕಿಸಿ ಸೂಕ್ತ ಕ್ರಮಕೈಗೊಳ್ಳುವಂತೆ ಮಾನ್ಯ ನೋಡಲ್ ಅಧಿಕಾರಿಗಳು ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು.

ನಂತರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರವರ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -174 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 174 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)